ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ    ದಿನಾಂಕ : DATE : 16/07/2019

ಅಧಿಕಾರಿಗಳ ಬಡ್ತಿ, ನೇಮಕ, ವರ್ಗಾವಣೆ, ಅನುದಾನ ಬಿಡುಗಡೆಯಲ್ಲಿ ಸರಕಾರ ತಲ್ಲೀನ

# ಆತುರದಲ್ಲಿ ಕಡತ ವಿಲೇವಾರಿ ಮೈತ್ರಿ ಸರಕಾರಕ್ಕೆ ಛೀಮಾರಿ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮೈತ್ರಿ ಸರಕಾರ ಬಹುಮತದ ಸಾಬೀತು ಪಡಿಸುವ ಒತ್ತಡದಲ್ಲಿ ಸಿಲುಕಿದ್ದ ಸಮಯದಲ್ಲಿ ಮೈತ್ರಿ ಸರಕಾರದ ಸಚಿವರು ಬಾಕಿ ಇರುವ ಕಡತಗಳನ್ನು ವಿಲೇವಾರಿ ಮಾಡುವ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ ಎಂದು ಬಿಜೆಪಿ ಗಂಭೀರ ಆರೋಪ ಮಾಡಿದೆ.

ವಿಧಾನಸೌಧದಲ್ಲಿ ಸೋಮವಾರ ಸಚಿವ ಜಮೀರ್ ಅವರು ತಮ್ಮ ಖಾತೆಗೆ ಸಂಬಂಧಿಸಿದ ಫೈಲ್ ಕ್ಲೀಯರ್ ಮಾಡುವ ಕಾರ್ಯದಲ್ಲಿ ಮಗ್ನರಾಗಿದ್ದರು. ಎರಡು ಮೂರು ಬಾರಿ ಯು.ಟಿ.ಖಾದರ್ ಅವರ ಬಳಿ ಬಂದು ಚರ್ಚೆ ನಡೆಸಿದ್ದು ಕಂಡು ಬಂತು.

ಇದರ ಬೆನ್ನಲ್ಲೇ ಬಿಎಸ್‌ವೈ ನಿವಾಸ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಶಾಸಕ ಬಸವರಾಜ್ ಬೊಮ್ಮಾಯಿ, ಗುರುವಾರ ಬಹುಮತ ಸಾಬೀತು ಪಡಿಸಬೇಕಾದ ದಿನಾಂಕ ನಿಗದಿ ಮಾಡಿರುವುದಿಂದ ಮೈತ್ರಿ ಸರಕಾರದ ಎಲ್ಲ ಸಚಿವರು ಕೂಡ ಓವರ್ ಟೈಂ ಕೆಲಸ ಮಾಡುತ್ತಿದ್ದಾರೆ. ಅಧಿಕಾರಿಗಳ ಬಡ್ತಿ, ನೇಮಕ, ವರ್ಗಾವಣೆ ಸೇರಿದಂತೆ ಅನುದಾನ ಬಿಡುಗಡೆ ಮಾಡುವ ಕಾರ್ಯದಲ್ಲಿ ಬ್ಯೂಸಿಯಾಗಿದ್ದಾರೆ. ಕೂಡಲೇ ಸರಕಾರ ಕಾರ್ಯದರ್ಶಿಗಳು ಇದಕ್ಕೆ ಬ್ರೇಕ್ ಹಾಕಬೇಕು. ಯಾವುದೇ ರೀತಿಯ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳಬಾರದು ಎಂದು ರಾಜ್ಯಪಾಲರ ಆದೇಶದ ನಡುವೆಯೂ ಕೂಡ ಓವರ್ ಟೈಂ ಕೆಲಸ ಮಾಡಿ ಕ್ಲಿಯರ್ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.



ಈಗಾಗಲೇ ಈ ಆದೇಶ ಮುಖ್ಯ ಕಾರ್ಯದರ್ಶಿಗಳಿಗೆ ರಾಜ್ಯಪಾಲರು ನೀಡಿದ್ದಾರೆ. ಸಚಿವರ ಈ ನಡೆ ನೋಡಿದರೆ ಸರಕಾರ ಉರುಳುವುದು ಖಚಿತವಾದಂತೆ ಅವರಿಗೆ ಕಾಣುತ್ತಿದೆ. ಆದ್ದರಿಂದಲೇ ಹಳೆಯ ದಿನಾಂಕವನ್ನು ಹಾಕಿ ಕಡತಗಳನ್ನು ವಿಲೇವಾರಿ ಮಾಡುತ್ತಿದ್ದಾರೆ.

ಆ ಮೂಲಕ ಭ್ರಷ್ಟಾಚಾರಕ್ಕೆ ಮೈತ್ರಿ ಸರಕಾರ ಸಚಿವರು ಮುಂದಾಗಿದ್ದಾರೆ ಎಂದು ದೂರಿದರು.

> **"** ಈಗಾಗಲೇ ಈ ಆದೇಶ ಮುಖ್ಯ ಕಾರ್ಯದರ್ಶಿಗಳಿಗೆ ರಾಜ್ಯಪಾಲರು ನೀಡಿದ್ದಾರೆ. ಸಚಿವರ ಈ ನಡೆ ನೋಡಿದರೆ ಸರಕಾರ ಉರುಳುವುದು ಖಚಿತವಾದಂತೆ ಅವರಿಗೆ ಕಾಣುತ್ತಿದೆ. ಆದ್ದರಿಂದಲೇ ಹಳೆಯ ದಿನಾಂಕವನ್ನು ಹಾಕಿ ಕಡತಗಳನ್ನು ವಿಲೇವಾರಿ ಮಾಡುತ್ತಿದ್ದಾರೆ. ಆ ಮೂಲಕ ಭ್ರಷ್ಟಾಚಾರಕ್ಕೆ ಮೈತ್ರಿ ಸರಕಾರ ಸಚಿವರು ಮುಂದಾಗಿದ್ದಾರೆ.
>
> **ಬಸವರಾಜ್ ಬೊಮ್ಮಾಯಿ** ಶಾಸಕ

ಸರಕಾರ ಯಾವುದೇ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳಬಾರದು ಎಂದು ರಾಜ್ಯಪಾಲರು ಆದೇಶ ನೀಡಿದ್ದರೂ ವಿಶೇಷ ಸರಕಾರಿ ವಕೀಲರಾಗಿ ಬಿ.ಎನ್.ಜಗದೀಶ್ ಅವರನ್ನು ನೇಮಿಸಿ ಸರಕಾರದ ಆದೇಶ ಹೊರಡಿಸಿದೆ.

5